# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 12 (82)
2. ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 04.12.2023
4. ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಹಿರಿಯ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡುವ ಕುರಿತು ಸರ್ಕಾರದ ನಿಲುವೇನು; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br><br>2008ರಿಂದ ದೈಹಿಕ ಶಿಕ್ಷಣ ವಿಷಯವನ್ನು ಪಠ್ಯ ವಿಷಯವಾಗಿ 6 ರಿಂದ 9ನೇ ತರಗತಿಯವರಗೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಜಾರಿಗೊಳಿಸಿ ಬೋಧನೆ ಮತ್ತು ಮೌಲ್ಯ ಮಾಪನಕ್ಕೆ ಒಳಪಡಿಸಲಾಗಿರುತ್ತದೆ.<br><br>**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**<br><br>2012–2013ನೇ ಸಾಲಿನಿಂದ 10ನೇ ತರಗತಿಗೂ ದೈಹಿಕ ಶಿಕ್ಷಣ ವಿಷಯನ್ನು ಪಠ್ಯ ವಿಷಯವಾಗಿ ಜಾರಿಗೊಳಿಸಲಾಗಿದೆ.<br><br>**ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**<br><br>• ಖಾಲಿ ಇರುವ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಲ್ಲಿ 10 ಹುದ್ದೆಗಳನ್ನು ನೇರ ನೇಮಕಾತಿ ವಿಧಾನ ಮೂಲಕ ಭರ್ತಿ ಮಾಡಬೇಕಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಆಯ್ಕೆ ಪ್ರಕ್ರಿಯೆ ನಡೆಸಿ, ಆಯ್ಕೆ ಪಟ್ಟಿಯನ್ನು ನೀಡುವಂತೆ ಕೋರಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕರ ನಿರ್ದೇಶಕರಿಗೆ ಕೋರಲಾಗಿರುತ್ತದೆ.<br>• ಉಳಿದ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಬಡ್ತಿ ವಿಧಾನ ಮೂಲಕ ಭರ್ತಿ ಮಾಡಬೇಕಿದ್ದು, ಈ ಕುರಿತು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ಮಾಹಿತಿ ಕೋರಲಾಗಿದ್ದು, ಮಾಹಿತಿ ಸ್ವೀಕೃತವಾದ ನಂತರ ಬಡ್ತಿ ನೀಡುವ ಬಗ್ಗೆ ಕ್ರಮ ವಹಿಸಲಾಗುವುದು. |
| ಆ) | ಸದರಿ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ / ಉಪನ್ಯಾಸಕರ ಸಂಖ್ಯೆ ಎಷ್ಟು; | 1. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದೈಹಿಕ ಶಿಕ್ಷಣ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ:4127.<br>2. ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಣ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ:3589<br><br>**ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ** |

| | | |
|---|---|---|
| | | ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಉಪನ್ಯಾಸಕರು ಯಾರೂ ಇರುವುದಿಲ್ಲ.<br><br>ಆದರೆ, ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿಪುರಸಭೆ), ಕನಕಪುರ ಇಲ್ಲಿಒಬ್ಬರು ದೈಹಿಕ ಶಿಕ್ಷಣ ಶಿಕ್ಷಕರು ಮಾತ್ರ ಕಾರ್ಯ ನಿರ್ವಹಿಸುತ್ತಿದ್ದಾರೆ. |
| ಇ) | ಅವಶ್ಯಕತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಶಿಕ್ಷಕರ ಸಂಖ್ಯೆ ಎಷ್ಟು; ಖಾಲಿ ಇರುವ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಯಾವಾಗ ಮಾಡಲಾಗುವುದು; ಈ ಹಿಂದೆ ಯಾವಾಗ ನೇಮಕ ಮಾಡಿಕೊಳ್ಳಲಾಗಿತ್ತು. | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br><br>• ಅವಶ್ಯಕತೆಯಿರುವ ಶಿಕ್ಷಕರ ಸಂಖ್ಯೆ:2120.<br>• ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ:4127.<br>• ಖಾಲಿಯಿರುವ ಶಿಕ್ಷಕರ ಸಂಖ್ಯೆ:2120.<br>• ಪ್ರಸ್ತುತ 2120 ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿಗೆ ಅನುಮತಿ ನೀಡಲು ಕೋರಿ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>• 2008ನೇ ಸಾಲಿನಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಳ್ಳಲಾಗಿದೆ.<br><br>**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**<br><br>• ಅವಶ್ಯಕತೆಯಿರುವ ಶಿಕ್ಷಕರ ಸಂಖ್ಯೆ:1621.<br>• ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ:3589<br>• ಖಾಲಿಯಿರುವ ಶಿಕ್ಷಕರ ಸಂಖ್ಯೆ:1621.<br>• ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಜಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>• 2014-15ನೇ ಸಾಲಿನಲ್ಲಿ 148 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. |

| | | |
|---|---|---|
| ಈ.) | ಶಿಕ್ಷಕರ ನೇಮಕಾತಿಯು ಎಷ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಒಬ್ಬ ಶಿಕ್ಷಕರ ನೇಮಕಾತಿ ಮಾಡಲಾಗುತ್ತಿದೆ; (ವಿದ್ಯಾರ್ಥಿ: ಶಿಕ್ಷಕರ ಅನುಪಾತ) ಒಬ್ಬ ದೈಹಿಕ ಶಿಕ್ಷಕರಿಗೆ 500 ವಿದ್ಯಾರ್ಥಿಗಳ ಅನುಪಾತ ಇರುವುದು ನಿಜವೇ; | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br><br>ಮಕ್ಕಳ ದಾಖಲಾತಿ 200ಕ್ಕಿಂತ ಹೆಚ್ಚು ಇರುವ ಶಾಲೆಗಳಲ್ಲಿ ಒಬ್ಬ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು.<br><br>**ಪ್ರೌಢಶಾಲೆಗೆ ಸಂಬಂಧಿಸಿದಂತೆ**<br><br>ಒಂದು ಶಾಲೆಗೆ ಒಂದು ಹುದ್ದೆಯಂತೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಆದರೆ ಒಂದು ಪ್ರೌಢಶಾಲೆಯಲ್ಲಿ 10 ಅಥವಾ 10 ವಿಭಾಗಗಳ ನಂತರ 2ನೇ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ನೀಡಲಾಗಿದೆ.<br><br>**ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**<br><br>ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಉಪನ್ಯಾಸಕರು ಯಾರೂ ಇರುವುದಿಲ್ಲ.<br><br>ಆದರೆ, ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿಪುರಸಭೆ), ಕನಕಪುರ ಇಲ್ಲಿಒಬ್ಬರು ದೈಹಿಕ ಶಿಕ್ಷಣ ಶಿಕ್ಷಕರು ಮಾತ್ರ ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>ಆರ್ಥಿಕ ಇಲಾಖೆಯು ದಿನಾಂಕ:14/06/2023ರಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ ಪ್ರಸ್ತುತ ಇರುವ 120 ವಿದ್ಯಾರ್ಥಿಗಳ ಕಾರ್ಯಭಾರದ ಮಾನದಂಡವನ್ನು 500 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ನಿರ್ಣಯಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದ್ದು, ಈ ಬಗ್ಗೆ ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಉ) | ಸದರಿ ದೈಹಿಕ ಶಿಕ್ಷಣ ಶಿಕ್ಷಕರ / ಉಪನ್ಯಾಸಕರ ವೃಂದ ಮತ್ತು ನೇಮಕಾತಿಯ ತಿದ್ದುಪಡಿಆರ್ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯ ಒಳಗೆ ಇದನ್ನು ಪೂರ್ಣಗೊಳಿಸಲಾಗುವುದು; | **ಪ್ರಾಥಮಿಕ ಮತ್ತು ಪ್ರೌಢಶಾಲೆಗೆ ಸಂಬಂಧಿಸಿದಂತೆ**<br><br>ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಯ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>**ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**<br><br>ಈಗಾಗಲೇ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 35 ಡಿಜಿಎ 2009 ದಿನಾಂಕ:15-05-2014ರ ಸಮಗ್ರ ಪುನರಾವಲೋಕನ ವೃಂದ ಮತ್ತು ನೇಮಕಾತಿ ನಿಯಮಗಳು ರಚನೆಯಾಗಿದ್ದು, ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ |

| | | |
|---|---|---|
| | | ವೃಂದಬಲ, ನೇಮಕಾತಿ ವಿಧಾನ ಮತ್ತು ವಿದ್ಯಾರ್ಹತೆಯ ಮಾನದಂಡವನ್ನು ಅಳವಡಿಸಲಾಗಿರುತ್ತದೆ. |
| ಊ) | ಪ್ರಸ್ತುತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಖಾಲಿ ಇದ್ದಲ್ಲಿ ಆ ವಿಷಯವನ್ನು ಬೋಧನೆ ಮಾಡುತ್ತಿರುವ ಬೋಧಕರು ಯಾರು; ನಿರ್ವಹಣೆಯನ್ನು ಹೇಗೆ ಮಾಡಲಾಗುತ್ತಿದೆ? (ಸಂಪೂರ್ಣ ಮಾಹಿತಿ ನೀಡುವುದು) | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br><br>ದೈಹಿಕ ಶಿಕ್ಷಣ ಶಿಕ್ಷಕರು ಇಲ್ಲದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ದೈಹಿಕ ಶಿಕ್ಷಣದ ಸಾಮರ್ಥ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರುಗಳ ಸೇವೆಯನ್ನು ವಾರದಲ್ಲಿ 03 ದಿನ ಮೂಲ ಶಾಲೆಯಲ್ಲಿ ಹಾಗೂ 03 ದಿನ ಕ್ಲಸ್ಟರ್ ಹಂತದ ಸ್ಥಳೀಯ ಹತ್ತಿರದ ಶಾಲೆಗಳಿಗೆ ನಿಯೋಜಿಸಲು ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ.<br><br>**ಪ್ರೌಢಶಾಲೆಗೆ ಸಂಬಂಧಿಸಿದಂತೆ**<br><br>ದೈಹಿಕ ಶಿಕ್ಷಣ ಶಿಕ್ಷಕರುಗಳ ಹುದ್ದೆಗಳು ಖಾಲಿಯಿರುವ ಸರ್ಕಾರಿ ಪ್ರೌಢಶಾಲೆಗಳಿಗೆ ತಾಲ್ಲೂಕುಗಳಲ್ಲಿ ಕಡಿಮೆ ಕಾರ್ಯಭಾರವಿರುವ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಿಗೆ ಹತ್ತಿರದ ಶಾಲೆಗಳಿಗೆ ವಾರಕ್ಕೆ 2 ಅಥವಾ 3 ದಿನ ನಿಯೋಜನೆ ಮಾಡಿ ಬೋಧನೆ ಮಾಡಿಸಲಾಗುತ್ತಿದೆ.<br><br>**ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ**<br><br>ಕಾಲೇಜಿನಲ್ಲಿನ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಲ್ಲಿ ಒಬ್ಬ ಸೂಕ್ತ ಉಪನ್ಯಾಸಕರಿಗೆ ಕ್ರೀಡಾ ಚಟುವಟಿಕೆಗಳನ್ನು ನಿರ್ವಹಿಸುವಂತೆ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಕಾರ್ಯವನ್ನು ನಿಗದಿಪಡಿಸಲಾಗಿರುತ್ತದೆ. ಅದರಂತೆ ತಾಲ್ಲೂಕು, ಜಿಲ್ಲಾ ಮತ್ತು ವಿವಿಧ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲು ವಿದ್ಯಾರ್ಥಿಗಳಿಗೆ ಸೂಕ್ತ ತರಬೇತಿ ನೀಡಲಾಗುತ್ತಿದೆ. |

ಸಂಖ್ಯೆ: ಇಪಿ 187 ಎಲ್‌ಜಿಪಿ 2023

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು